ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಮೀಸಲಿಟ್ಟ ಅನುದಾನದ ಬಗ್ಗೆ

ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) -

66 (681) ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಕಳೆದ 2 ವರ್ಷಗಳಿಂದ ನಿಗದಿಪಡಿಸಿದ ಅನುದಾನವೆಷ್ಟು;

(ಆ) ಈ ಅನುದಾನವನ್ನು ಯಾವ ಯಾವ ಕ್ರೀಡಾ ಚಟುವಟಿಕೆಗಳಿಗೆ ನೀಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರಸ್ತುತ ರಾಜ್ಯದಲ್ಲಿ ಯುವ ಜನರನ್ನು ಪ್ರಮುಖವಾಗಿ ಗ್ರಾಮೀಣ ಪ್ರದೇಶದಲ್ಲಿರುವ ಕ್ರೀಡಾಪಟುಗಳನ್ನು ಉತ್ತೇಜಿಸಲು ಸರ್ಕಾರವು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಕಳೆದ 2 ವರ್ಷದಿಂದ ಕ್ರೀಡಾಪಟುಗಳ ಉತ್ತಮ ಸಾಧನೆಯನ್ನು ಗುರುತಿಸಿ ಅವರುಗಳಿಗೆ ನೀಡಿರುವ ಸೌಲಭ್ಯಗಳೇನು; ಎಷ್ಟು ಜನ ಕ್ರೀಡಾಪಟುಗಳಿಗೆ ನೀಡಲಾಗಿದೆ? (ಸಂಪೂರ್ಣ ವರದಿಯನ್ನು ನೀಡುವುದು)